**All India Radio: Bangalore**
**National Bulletin In Kannada**
**15.04.2025 07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**15.04.2025 07.35 a.m.**
*********************

ಮುಖ್ಯಾಂಶಗಳು

೧. ಹರಿಯಾಣದಲ್ಲಿ ೧೦ ಸಾವಿರ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ಚಾಲನೆ

೨. ವೇವ್ಸ್ ಆನಿಮೆ ಮತ್ತು ಮಾಂಗಾ ಸ್ಪರ್ಧೆಯ ರಾಜ್ಯ ಮಟ್ಟದ ಅರ್ಹತಾ ಸುತ್ತು ಇಂದು ಬೆಂಗಳೂರಿನಲ್ಲಿ ಆಯೋಜನೆ

೩. ನವದೆಹಲಿಯಲ್ಲಿಂದು ಆರನೇ ಆವೃತ್ತಿಯ ರಾಷ್ಟ್ರೀಯ ಹೆದ್ದಾರಿ ಶ್ರೇಷ್ಠತಾ ಪ್ರಶಸ್ತಿ ಪ್ರದಾನ ಸಮಾರಂಭ

೪. ಐಪಿಎಲ್ ಟಿ-೨೦ ಕ್ರಿಕೆಟ್: ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್‌ಗೆ ೫ ವಿಕೆಟ್‌ಗಳ ಜಯ

*****************

ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಡಾ. ಭೀಮರಾವ್ ಅಂಬೇಡ್ಕರ್ ಅವರ ಜನ್ಮ ದಿನಾಚರಣೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಹರಿಯಾಣದಲ್ಲಿ ನಿನ್ನೆ ಸುಮಾರು ೧೦ ಸಾವಿರ ಕೋಟಿ ರೂಪಾಯಿ ಹಲವಾರು ಅಭಿವೃದ್ಧಿ ಯೋಜನೆಗಳನ್ನು ಲೋಕಾರ್ಪಣೆ ಮಾಡಿದರು.

ಯಮುನಾನಗರದ ದೀನಬಂಧು ಛೋಟು ರಾಮ್ ಉಷ್ಣ ವಿದ್ಯುತ್ ಸ್ಥಾವರದ ೮೦೦ ಮೆಗಾವ್ಯಾಟ್ ಸಾಮರ್ಥ್ಯದ ಮೂರನೇ ಘಟಕಕ್ಕೆ ಅವರು ಶಂಕುಸ್ಥಾಪನೆ ನೆರವೇರಿಸಿದರು, ಇದನ್ನು ೮ ಸಾವಿರದ ೪೭೯ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗುವುದು. ಯಮುನಾನಗರದಲ್ಲಿ ೯೦ ಕೋಟಿ ರೂಪಾಯಿ ಮೌಲ್ಯದ ಗೋಬರ್ ಧನ್ ಸ್ಥಾವರಕ್ಕೆ ಮೋದಿ ಅವರು ಶಂಕುಸ್ಥಾಪನೆ ನೆರವೇರಿಸಿದರು ಮತ್ತು ೧ ಸಾವಿರದನ ೬೯ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ರೇವಾರಿ ಬೈಪಾಸ್ ಅನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಬಾಬಾಸಾಹೇಬ್ ಅಂಬೇಡ್ಕರ್ ಅವರ ದೃಷ್ಟಿಕೋನವನ್ನು ಮುನ್ನಡೆಸುವ ತಮ್ಮ ಸರ್ಕಾರದ ಬದ್ಧತೆಯ ಬಗ್ಗೆ ಹೆಮ್ಮೆ ವ್ಯಕ್ತಪಡಿಸಿದರು. ಕೈಗಾರಿಕಾ ಅಭಿವೃದ್ಧಿಯು ಸಾಮಾಜಿಕ ನ್ಯಾಯಕ್ಕೆ ಒಂದು ಮಾರ್ಗ ಎಂಬ ಬಾಬಾಸಾಹೇಬ್ ಅವರ ದೃಷ್ಟಿಕೋನವನ್ನು ಪ್ರಧಾನಿ ಒತ್ತಿ ಹೇಳಿದರು.

ಧ್ವನಿ – ಪಿಎಂ ಮೋದಿ

*****************

ವೇವ್ಸ್ ಆನಿಮೆ ಮತ್ತು ಮಾಂಗಾ ಸ್ಪರ್ಧೆಯ ರಾಜ್ಯ ಮಟ್ಟದ ಅರ್ಹತಾ ಸುತ್ತಿನ ಸ್ಪರ್ಧಿಯನ್ನು ಆಯ್ಕೆ ಮಾಡಲು, ಭಾರತೀಯ ಮಾಧ್ಯಮ ಮತ್ತು ಮನರಂಜನಾ ಸಂಘ, ಬೆಂಗಳೂರಿನ ಬಸವನಗುಡಿಯ ವಿವಿಎನ್ ಪದವಿ ಕಾಲೇಜಿನಲ್ಲಿಂದು ಡಬ್ಲ್ಯೂಎಂ

ಅಂದರೆ ವೇವ್ಸ್ ಅನಿಮೆ ಮತ್ತು ಮಂಗಾ ಸ್ಪರ್ಧೆ ಆಯೋಜಿಸುತ್ತಿದೆ. ಕರ್ನಾಟಕದ ಅರ್ಹತಾ ಸುತ್ತಿನ ಸ್ಪರ್ಧಿ ಮುಂಬೈನಲ್ಲಿ ವೇವ್ಸ್ - ೨೦೨೫ರ ವೇಳೆ ನಡೆಯುವ ಡಬ್ಲ್ಯೂಎಎಂ ರಾಷ್ಟ್ರೀಯ ಅಂತಿಮ ಸುತ್ತಿನಲ್ಲಿ ಭಾಗವಹಿಸಲಿದ್ದಾರೆ.

ಈ ಕುರಿತು ಮಾತನಾಡಿರುವ ಭಾರತೀಯ ಮಾಧ್ಯಮ ಮತ್ತು ಮನರಂಜನಾ ಸಂಘದ ಕಾರ್ಯದರ್ಶಿ ಅಂಕುರ್ ಭಾಸಿನ್, ಬೆಂಗಳೂರು ನಾವೀನ್ಯತೆ ಮತ್ತು ಸೃಜನಶೀಲತೆಗೆ ಕೇಂದ್ರವಾಗಿದ್ದು, ಇಲ್ಲಿಂದ ಹೊರಹೊಮ್ಮುವ ಕಲೆಯನ್ನು ವೀಕ್ಷಿಸಲು ಉತ್ಸುಕರಾಗಿದ್ದೇವೆ. ಗ್ರ್ಯಾಂಡ್ ಫಿನಾಲೆಗೆ ಮೊದಲು, ಅಂತಿಮ ರಾಜ್ಯ ಅರ್ಹತಾ ಸುತ್ತಿನ ಸ್ಪರ್ಧೆ ಬೆಂಗಳೂರಿನಲ್ಲಿ ನಡೆಯುತ್ತಿದೆ. ಈ ಸ್ಪರ್ಧೆ ಭಾರತೀಯ ರಚನಾಕಾರರಿಗೆ ದೊಡ್ಡ ಕನಸುಗಳನ್ನು ಕಾಣಲು, ಸ್ಪರ್ಧಿಸಲು ಮತ್ತು ಅಂತಿಮವಾಗಿ ಜಾಗತಿಕವಾಗಿ ಗುರುತಿಸಿಕೊಳ್ಳಲು ರಾಷ್ಟ್ರೀಯ ವೇದಿಕೆಯನ್ನು ಒದಗಿಸುತ್ತದೆ ಎಂದು ಹೇಳಿದರು.

ಬೆಂಗಳೂರಿಗಿಂತ ಮೊದಲು, ಗುವಾಹಟಿ, ಕೋಲ್ಕತ್ತಾ, ಭುವನೇಶ್ವರ, ದೆಹಲಿ, ವಾರಣಾಸಿ, ಮುಂಬೈ, ನಾಗ್ಪುರ, ಅಹಮದಾಬಾದ್, ಚೆನ್ನೈ ಮತ್ತು ಹೈದರಾಬಾದ್‌ನಲ್ಲಿ ಅರ್ಹತಾ ಸುತ್ತಿನ ಆವೃತ್ತಿಗಳು ನಡೆದಿವೆ.

ಈ ಸ್ಪರ್ಧೆ ಜಪಾನೀಸ್ ಶೈಲಿಯ ಅನಿಮೇಟೆಡ್ ವಿಷಯ - ಅನಿಮೆ, ಜಪಾನೀಸ್ ಶೈಲಿಯ ಕಾಮಿಕ್ಸ್ -ಮಾಂಗಾ, ಡಿಜಿಟಲ್ ಚಿತ್ರಕಥೆ - ವೆಬ್‌ಟೂನ್‌ಗಳು, ಮೂಲ ಅಥವಾ ಅಭಿಮಾನಿ ಪಾತ್ರಗಳ ವೇಷಭೂಷಣ ಪ್ರದರ್ಶನ - ಕಾಸ್‌ಪ್ಲೇ, ಧ್ವನಿ ನಟನೆ ಎಂಬ ವಿಭಾಗಗಳಲ್ಲಿ ನಡೆಯುತ್ತಿದೆ.

ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಸಹಯೋಗದೊಂದಿಗೆ ನಡೆಯುತ್ತಿರುವ ಈ ಸ್ಪರ್ಧೆ ಭಾರತದ ಅತಿದೊಡ್ಡ ಮಾಧ್ಯಮ ವೇದಿಕೆಯಾದ ವಿಶ್ವ ಶ್ರವಣ-ದೃಶ ಮನೋರಂಜನಾ ಶೃಂಗಸಭೆ - ವೇವ್ಸ್‌ನ ಭಾಗವಾಗಿದೆ.

ವೇವ್ಸ್ ಆನಿಮೆ ಮತ್ತು ಮಾಂಗಾ ಸ್ಪರ್ಧೆಯ ವಿಜೇತರು, ವ್ಯಾಕೊಮ್ ಪೆನ್ ಟ್ಯಾಬ್ಲೆಟ್‌ಗಳು, ಫೇಬರ್-ಕ್ಯಾಸ್ಟೆಲ್ ಆರ್ಟ್ ಗುಡೀಸ್, ನಗದು ಬಹುಮಾನಗಳನ್ನು ಪಡೆಯಲಿದ್ದಾರೆ.

ಇದರ ಜೊತೆಗೆ ರಾಷ್ಟ್ರೀಯ ಚಾಂಪಿಯನ್‌ಗಳು ಟೋಕಿಯೊದಲ್ಲಿ ನಡೆಯುವ ಅನಿಮೆ ಜಪಾನ್ ೨೦೨೬ ಯಾವುದೇ ವೆಚ್ಚವನ್ನು ಪಾವತಿಸದೇ ಪ್ರವಾಸ ಬೆಳೆಸಿ ಭಾಗವಹಿಸಲು ಅವಕಾಶ ಗಳಿಸುತ್ತಾರೆ. ಆ ಮೂಲಕ ವಿಶ್ವದ ಅತಿದೊಡ್ಡ ಆನಿಮೆ ವೇದಿಕೆಯಲ್ಲಿ ಭಾರತವನ್ನು ಪ್ರತಿನಿಧಿಸುತ್ತದೆ.

ವೇವ್ಸ್ ಆನಿಮೆ ಮತ್ತು ಮಾಂಗಾ ಸ್ಪರ್ಧೆ ವಿದ್ಯಾರ್ಥಿಗಳು ಮತ್ತು ವೃತ್ತಿಪರರು ಸೇರಿದಂತೆ ಎಲ್ಲರಿಗೂ ಮುಕ್ತವಾಗಿದ್ದು, ಉಚಿತ ಪ್ರವೇಶವಿದೆ.

ಆಸಕ್ತರು www.meai.in/wam ಮೂಲಕ ಪೂರ್ವ-ನೋಂದಣಿ ಮಾಡಿಕೊಳ್ಳಬೇಕಿದೆ.

ಮಾಧ್ಯಮ ಮತ್ತು ಮನರಂಜನೆ ವಲಯದ ಮೈಲಿಗಲ್ಲು ಕಾರ್ಯಕ್ರಮವಾದ ಮೊದಲ ವಿಶ್ವ ಶ್ರವಣ-ದೃಶ್ಯ ಮತ್ತು ಮನರಂಜನಾ ಶೃಂಗಸಭೆಯನ್ನು ಮೇ ೧ ರಿಂದ ೪, ರವರೆಗೆ ಮಹಾರಾಷ್ಟ್ರದ ಮುಂಬೈನಲ್ಲಿ ಆಯೋಜಿಸಲಾಗುತ್ತಿದೆ.

*****************

ರಾಷ್ಟ್ರೀಯ ಕ್ವಾಂಟಮ್ ಮಿಷನ್ ಅಡಿಯಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಆಯ್ಕೆ ಮಾಡಿದ ನವೋದ್ಯಮಗಳಲ್ಲಿ ಒಂದಾದ ಕ್ಯೂಎನ್‌ಯು ಲ್ಯಾಬ್ಸ್ ವಿಶ್ವದ ಮೊದಲ ಮತ್ತು ವಿಶಿಷ್ಟ ವೇದಿಕೆಯಾದ ಕಿ-ಶೀಲ್ಡ್ ಅನ್ನು ಪ್ರಾರಂಭಿಸಿದೆ.

ಇದು ಉದ್ಯಮಗಳು ತಮ್ಮ ನಿರ್ಣಾಯಕ ಮೂಲಸೌಕರ್ಯವನ್ನು ರಕ್ಷಿಸಲು ಅಧಿಕಾರ ನೀಡುತ್ತದೆ. ಇದು ಇಂದು ವಿಶ್ವ ಕ್ವಾಂಟಮ್ ದಿನದ ಸಂದರ್ಭದಲ್ಲಿ ಕ್ಲೌಡ್ ಅಥವಾ ಹೈಬ್ರಿಡ್ ಸೇರಿದಂತೆ ಯಾವುದೇ ಪರಿಸರದಲ್ಲಿ ತಡೆರಹಿತ ಕ್ರಿಪ್ಟೋಗ್ರಫಿ ನಿರ್ವಹಣೆಯನ್ನು ಸಕ್ರಿಯಗೊಳಿಸುತ್ತದೆ.

*****************

ರಾಷ್ಟ್ರೀಯ ಹೆದ್ದಾರಿ ಶ್ರೇಷ್ಠತಾ ಪ್ರಶಸ್ತಿ ೨೦೨೪ರ ಆರನೇ ಆವೃತ್ತಿಯು ಇಂದು ನವದೆಹಲಿಯಲ್ಲಿ ನಡೆಯಲಿದೆ. ಇದು ಉತ್ತಮ ಅಭ್ಯಾಸಗಳನ್ನು ಪ್ರೋತ್ಸಾಹಿಸುವ ಮತ್ತು ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿಯಲ್ಲಿ ನೀಡಿದ ಕೊಡುಗೆಗಾಗಿ ವೃತ್ತಿಪರರನ್ನು ಗುರುತಿಸುವ ಗುರಿಯನ್ನು ಹೊಂದಿದೆ.

ರಾಷ್ಟ್ರೀಯ ಹೆದ್ದಾರಿ ಮೂಲಸೌಕರ್ಯ ವಲಯದಲ್ಲಿನ ಅತ್ಯುತ್ತಮ ಸಾಧನೆಗಳನ್ನು ಆಚರಿಸಲು ಈ ಸಮಾರಂಭ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತವೆ. ದೇಶಾದ್ಯಂತ ಉನ್ನತ ಕಾರ್ಯಕ್ಷಮತೆಯ ಹೆದ್ದಾರಿಗಳ ನಿರ್ಮಾಣ ಮತ್ತು ನಿರ್ವಹಣೆಗೆ ನೀಡಿದ ಕೊಡುಗೆಗಳಿಗಾಗಿ ವ್ಯಕ್ತಿಗಳು ಮತ್ತು ಪಾಲುದಾರರನ್ನು ಗೌರವಿಸಲಾಗುತ್ತಿದೆ.

*****************

ಸಂವಿಧಾನ ಕಾಲದ ಪರೀಕ್ಷೆಯನ್ನು ಸಮರ್ಥವಾಗಿ ಎದುರಿಸಿದ್ದು, ದೇಶವನ್ನು ಬಲಿಷ್ಠ, ಸ್ಥಿರ ಮತ್ತು ಒಂದಾಗಿಸಿದೆ ಎಂದು ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಬಿ ಆರ್ ಗವಾಯಿ ಹೇಳಿದ್ದಾರೆ.

ನಿನ್ನೆ ನವದೆಹಲಿಯ ಡಾ. ಅಂಬೇಡ್ಕರ್ ಅಂತರರಾಷ್ಟ್ರೀಯ ಕೇಂದ್ರದಲ್ಲಿ ಆಯೋಜಿಸಲಾದ ಮೊದಲ 'ಡಾ. ಅಂಬೇಡ್ಕರ್ ಸ್ಮಾರಕ ಉಪನ್ಯಾಸ'ದಲ್ಲಿ ಅವರು ಮಾತನಾಡಿದರು. ವಿವಿಧ ಬಾಹ್ಯ ಆಕ್ರಮಣಗಳು ಮತ್ತು ಆಂತರಿಕ ಅಡಚಣೆಗಳನ್ನು ಎದುರಿಸಿದರೂ, ಭಾರತ ಇಂದು ಐಕ್ಯತೆಯೊಂದಿಗೆ ಬಲಿಷ್ಠವಾಗಿ ನಿಂತಿದೆ. ಬದಲಾಗುತ್ತಿರುವ ಅಗತ್ಯಗಳಿಗೆ ಅನುಗುಣವಾಗಿ ಕಾಲಕಾಲಕ್ಕೆ ಸಂವಿಧಾನವನ್ನು ತಿದ್ದುಪಡಿ ಮಾಡಲಾಗುತ್ತಿದೆ ಎಂದು ನ್ಯಾಯಮೂರ್ತಿ ಗವಾಯಿ ಹೇಳಿದರು.

*****************

ಲಕ್ನೋದ ಲೋಕ ಬಂಧು ಆಸ್ಪತ್ರೆಯ ಎರಡನೇ ಮಹಡಿಯಲ್ಲಿ ನಿನ್ನೆ ರಾತ್ರಿ ಭಾರಿ ಬೆಂಕಿ ಕಾಣಿಸಿಕೊಂಡಿದ್ದು, ಗಂಭೀರ ನಿಗಾ ಘಟಕದಲ್ಲಿರುವವರು ಸೇರಿದಂತೆ ೨೦೦ ಕ್ಕೂ ಹೆಚ್ಚು ರೋಗಿಗಳನ್ನು ಆಸ್ಪತ್ರೆಯಿಂದ ಸುರಕ್ಷಿತವಾಗಿ ಸ್ಥಳಾಂತರಿಸಲಾಗಿದೆ. ಈ ಘಟನೆಯು ರೋಗಿಗಳು ಮತ್ತು ಆಸ್ಪತ್ರೆ ಸಿಬ್ಬಂದಿಯಲ್ಲಿ ಆತಂಕ ಮೂಡಿಸಿತ್ತು.

ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಬೆಂಕಿಯ ಘಟನೆಯನ್ನು ಅರಿತು ಎಲ್ಲಾ ಬಾಧಿತ ರೋಗಿಗಳಿಗೆ ತಕ್ಷಣ ವೈದ್ಯಕೀಯ ಚಿಕಿತ್ಸೆ ದೊರೆಯುವಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಿನ್ನೆ ತಡರಾತ್ರಿ ಸ್ಥಳಕ್ಕೆ ಆಗಮಿಸಿದ ಉತ್ತರ ಪ್ರದೇಶದ ಉಪಮುಖ್ಯಮಂತ್ರಿ ಬ್ರಜೇಶ್ ಪಾಠಕ್, ಎರಡನೇ ಮಹಡಿಯಲ್ಲಿ ಬೆಂಕಿ ಪ್ರಾರಂಭವಾಯಿತು, ಆದರೆ ಆಸ್ಪತ್ರೆ ಸಿಬ್ಬಂದಿ ಮತ್ತು ತುರ್ತು ಸೇವೆಗಳ ತ್ವರಿತ ಚಿಂತನೆ ಮತ್ತು ಸಮನ್ವಯದಿಂದಾಗಿ ಸುಮಾರು ೨೦೦ ರೋಗಿಗಳನ್ನು ಸುರಕ್ಷಿತವಾಗಿ ಸ್ಥಳಾಂತರಿಸಲಾಯಿತು ಸಮಾಧಾನ ವ್ಯಕ್ತಪಡಿಸಿದರು.

ಉತ್ತರ ಪ್ರದೇಶದ ಆರೋಗ್ಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ಪಾರ್ಥ ಸಾರಥಿ ಸೇನ್ ಶರ್ಮಾ, ಘಟನೆಯಲ್ಲಿ ಯಾವುದೇ ಸಾವುನೋವು ಅಥವಾ ಗಾಯಗಳಾಗಿಲ್ಲ ಎಲ್ಲಾ ರೋಗಿಗಳನ್ನು ಬೇರೆ ಆಸ್ಪತ್ರೆಗೆ ಸುರಕ್ಕಿತವಾಗಿ ಸ್ಥಳಾಂತರಿಸಲಾಗಿದೆ ಎಂದು ಹೇಳಿದರು.

ಮುಖ್ಯ ವೈದ್ಯಕೀಯ ಅಧೀಕ್ಷಕ ಡಾ. ಅಜಯ್ ಶಂಕರ್ ತ್ರಿಪಾಠಿ ಮಾತನಾಡಿ, ಪ್ರಾಥಮಿಕ ಸಂಶೋಧನೆಗಳು ಶಾರ್ಟ್ ಸರ್ಕ್ಯೂಟ್ ಘಟನೆಗೆ ಕಾರಣವಾಗಿರಬಹುದು ಎಂದು ಸೂಚಿಸುತ್ತವೆ. ಆದಾಗ್ಯೂ, ವಿವರವಾದ ತನಿಖೆ ನಡೆಸಲಾಗುವುದು ಎಂದಿದ್ದಾರೆ.

*****************

ಪಶ್ಚಿಮ ಬಂಗಾಳದಲ್ಲಿ ವಕ್ಫ್ (ತಿದ್ದುಪಡಿ) ಕಾಯ್ದೆ ೨೦೨೫ ರ ವಿರುದ್ಧದ ಪ್ರತಿಭಟನೆಗಳನ್ನು ಗಮನದಲ್ಲಿಟ್ಟುಕೊಂಡು ಗಡಿ ಭದ್ರತಾ ಪಡೆಯ ದಕ್ಷಿಣ ಬಂಗಾಳ ವಿಭಾಗದ ಇನ್ಸ್‌ಪೆಕ್ಟರ್ ಜನರಲ್ ರವಿ ಗಾಂಧಿ ನಿನ್ನೆ ಮುರ್ಷಿದಾಬಾದ್‌ನ ಸಂಶೇರ್‌ಗಂಜ್‌ಗೆ ಭೇಟಿ ನೀಡಿದರು. ಅವರು ಹಿರಿಯ ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆ ನಡೆಸಿದರು.

ಏತನ್ಮಧ್ಯೆ, ದಕ್ಷಿಣ ೨೪ ಪರಗಣ ಜಿಲ್ಲೆಯ ಭಂಗರ್ ಪ್ರದೇಶದಲ್ಲಿ ಪ್ರತಿಭಟನೆ ನಡೆಯಿತು. ಪೊಲೀಸ್ ಸಿಬ್ಬಂದಿ ಮೇಲೆ ದಾಳಿ ನಡೆಸಲಾಯಿತು ಮತ್ತು ವಾಹನಗಳಿಗೆ ಹಾನಿ ಮತ್ತು ಕೆಲವು ವಾಹನಗಳಿಗೆ ಬೆಂಕಿ ಹಚ್ಚಲಾಯಿತು.

ಮತ್ತೊಂದೆಡೆ, ವಕ್ಫ್ ತಿದ್ದುಪಡಿ ಕಾಯ್ದೆಯ ಕುರಿತು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರ ಹೇಳಿಕೆಗಳ ವಿರುದ್ಧ ಬಿಜೆಪಿ ವಾಗ್ದಾಳಿ ನಡೆಸಿತು. ನವದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಪಕ್ಷದ ವಕ್ತಾರ ಸುಧಾಂಶು ತ್ರಿವೇದಿ, ಸರ್ಕಾರ ರಾಜ್ಯದಲ್ಲಿ ಈ ಕಾಯ್ದೆಯನ್ನು ಜಾರಿಗೆ ತರುವುದಿಲ್ಲ ಎಂಬ ಬ್ಯಾನರ್ಜಿ ಅವರ ಹೇಳಿಕೆ ಸಂವಿಧಾನಕ್ಕೆ ಅವಮಾನವಾಗಿದೆ ಎಂದು ಹೇಳಿದರು. ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ತುಷ್ಟೀಕರಣ ರಾಜಕೀಯದಲ್ಲಿ ತೊಡಗಿದ್ದಾರೆ ಎಂದು ತ್ರಿವೇದಿ ಆರೋಪಿಸಿದರು.

*****************

ಉತ್ತರ ಪ್ರದೇಶದ ಏಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಪಿಎಲ್ ಟಿ-೨೦ ಪಂದ್ಯದಲ್ಲಿ, ಚೆನ್ನೈ ಸೂಪರ್ ಕಿಂಗ್ಸ್ ತಂಡವು ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ೫ ವಿಕೆಟ್‌ಗಳ ಜಯ ಸಾಧಿಸಿದೆ.

೧೬೭ ರನ್‌ಗಳ ಗುರಿಯನ್ನು ಬೆನ್ನಟ್ಟಿದ ಚೆನ್ನೈ ತಂಡಕ್ಕೆ ಆರಂಭಿಕ ರಾಚಿನ್ ರವೀಂದ್ರ ಮತ್ತು ರಶೀದ್ ಶೇಖ್ ಜೋಡಿ ೫೦ ರನ್‌ಗಳನ್ನು ಗಳಿಸಿ, ಉತ್ತಮ ಆರಂಭವನ್ನು ನೀಡಿತು. ಶಿವಂ ದುಬೆ ೩೭ ಎಸೆತಗಳಲ್ಲಿ ೪೩ ರನ್ ಗಳಿಸಿದರು. ನಾಯಕ ಮಹೇಂದ್ರ ಸಿಂಗ್ ಧೋನಿ ೨೬ ರನ್‌ಗಳು ಕೇವಲ ೧೧ ಎಸೆತಗಳಲ್ಲಿ ಚೆನ್ನೈ ತಂಡವನ್ನು ೧೯.೩ ಓವರ್‌ಗಳಲ್ಲಿ ಅಂತಿಮ ಗುರಿಯನ್ನು ತಲುಪಿತು.

ಇಂದು ಪಂಜಾಬ್‌ನಲ್ಲಿ ನಡೆಯಲಿರುವ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ಹಾಗೂ ಕೊಲ್ಕತ್ತಾ ನೈಟ್‌ರೈಡರ್ಸ್ ತಂಡಗಳು ಮುಖಾಮುಖಿಯಾಗಲಿದೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

ಈ ನಡುವೆ, ಗಾಯದ ಕಾರಣ ಟೂರ್ನಿಯಿಂದ ಹೊರ ಬಿದ್ದಿರುವ ಚೆನ್ನೈ ಸೂಪರ್ ಕಿಂಗ್ಸ್‌ನ ಋತುರಾಜ್ ಗಾಯಕ್‌ವಾಡ್ ಬದಲಿಗೆ ಚೆನ್ನೈ ತಂಡ ಆಯುಷ್‌ಮಹತ್ರೆ ಅವರನ್ನು ಆಯ್ಕೆ ಮಾಡಿಕೊಂಡಿದೆ. ಹಾಗೆಯೇ ಪಂಜಾಬ್ ವೇಗದ ಬೌಲರ್ ಲಾಕಿಫರ್ಗುಸನ್ ಗಾಯದ ಕಾರಣ ಟೂರ್ನಿಯಿಂದ ಅನಿರ್ದಿಷ್ಟಾವಧಿಗೆ ಹೊರ ಬಿದ್ದಿದ್ದಾರೆ.

********ಮುಕ್ತಾಯ*********